ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿ. ಬೈರೇಗೌಡ (ಕೃಷಿ ಸಚಿವರು) : ಮಾನ್ಯ ಅಧ್ಯಕ್ಷರೆ,

I ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಮಂತ್ರಿ) ಅವರ ಪರವಾಗಿ

1964ನೇ ಸಾಲಿನ ಕರ್ನಾಟಕ ಭೂ ಕಂದಾಯ ಅಧಿನಿಯಮದ 194(2)ನೇ ಕಲಮಿನ ಮೇರೆಗೆ;

ಬೆಳಗಾಂ ಜಿಲ್ಲೆಯ ರಾಯಭಾಗ ತಾಲ್ಲೂಕಿನ 17 ಗ್ರಾಮಗಳ 1974-75ನೇ ಸಾಲಿನ ಭೂ ಕಂದಾಯ 26,894.33 ರೂ.ಗಳನ್ನು ಮನ್ನಾ ಮಾಡುವ ಸಂಬಂಧದಲ್ಲಿ ದಿನಾಂಕ 24.2.1995 ರಂದು ಹೊರಡಿಸಲಾದ ಆರ್ಡಿ 45 ಟಿಆರ್ಎಂ 95ನೇ ಕ್ರಮಾಂಕದ ಅಧಿಸೂಚನೆಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ,

II ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ರಾಜ್ ಮಂತ್ರಿ) ಅವರ ಪರವಾಗಿ 1993ರ ಕರ್ನಾಟಕ ಪಂಚಾಯತ್ರಾಜ್ ಅಧಿನಿಯಮದ 262(3)ನೇ ಕಲಮಿನ ಮೇರೆಗೆ; 1991-92ನೇ ಸಾಲಿನ ರಾಯಚೂರು ಜಿಲ್ಲಾ ಪಂಚಾಯತ್ನ ವಾರ್ಷಿಕ ಲೆಕ್ಕಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಶ್ರೀ ಪಿ.ಜಿ.ಆರ್. ಸಿಂಧ್ಯಾ : ಮಾನ್ಯ್ ಅಧ್ಯಕ್ಷರೆ,

III ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕಾ ಮಂತ್ರಿ) ಅವರ ಪರವಾಗಿ

1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ;

1992-93ನೇ ಸಾಲಿನ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ನಿಯಮಿತದ 48ನೇ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

IV ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಮಂತ್ರಿ) : ಮಾನ್ಯ ಅಧ್ಯಕ್ಷರೆ, ನಾನು 1980ರ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಅಧಿನಿಯಮದ 25ನೇ ಕಲಮಿನ ಮೇರೆಗೆ;

1. 1993-94ನೇ ಸಾಲಿನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಮಲಪ್ರಭಾ ಮತ್ತು ಘಟಪ್ರಭಾ ಯೋಜನೆಗಳ ವಾರ್ಷಿಕ ಆಡಳಿತ ವರದಿ;
2. 1992-93ನೇ ಸಾಲಿನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಕೃಷ್ಣಾ ಮೇಲ್ದಂಡೆ ಯೋಜನೆಯ ವಾರ್ಷಿಕ ವರದಿಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಶ್ರೀ ಸಿ. ಬೈರೇಗೌಡ (ಕೃಷಿ ಸಚಿವರು) : ಮಾನ್ಯ ಅಧ್ಯಕ್ಷರೇ, ನಾನು

(ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಿ) ಅವರ ಪರವಾಗಿ 1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ;

1989-90ನೇ ಸಾಲಿನ ಕರ್ನಾಟಕ ಚಲನಚಿತ್ರ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ 22ನೇ ವಾರ್ಷಿಕ ವರದಿ ಮತ್ತು ಲೆಕ್ಕಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

VI ಶ್ರೀ ತಿಪ್ಪೇಸ್ವಾಮಿ (ಅಬಕಾರಿ ಮಂತ್ರಿ) ಮಾನ್ಯ ಅಧ್ಯಕ್ಷರೆ, ನಾನು 1965ನೇ ಸಾಲಿನ ಕರ್ನಾಟಕ ಅಬಕಾರಿ ಕಾಯ್ದೆ 71(4)ನೇ ಕಲಮಿನ ಮೇರೆಗೆ;

ಅ) ಕರ್ನಾಟಕ ಅಬಕಾರಿ (ಅಬಕಾರಿ ಕರ ಮತ್ತು ಶುಲ್ಕ) ನಿಯಮಗಳು 1968ರ ತಿದ್ದುಪಡಿ ಸಂಬಂಧದಲ್ಲಿ ದಿನಾಂಕ 18.1.1995ರಂದು ಹೊರಡಿಸಲಾದ ಎಫ್ಡಿ 15 ಪಿ.ಇ.ಎಸ್.94(1)ನೇ ಕ್ರಮಾಂಕದ ಅಧಿಸೂಚನೆ;

ಆ) ಅಧಿಸೂಚನೆ ಸಂಖ್ಯೆ ಎಫ್ಡಿ 15 ಪಿಇಎಸ್ 94(1), ದಿನಾಂಕ 18.1.1995ಕ್ಕೆ ಸಂಬಂಧಿಸಿದಂತೆ ದಿನಾಂಕ 2.3.1995 ರಂದು ಹೊರಡಿಸಲಾದ ಎಫ್ಡಿ 15 ಪಿಇಎಸ್ 94ನೇ ಕ್ರಮಾಂಕದ ತಿದ್ದೋಲೆಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಎಲ್ಲಾ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು.

11.10 ಪಿ.ಎಂ.

ಅರ್ಜಿಯನ್ನೊಪ್ಪಿಸುವುದು

ಶ್ರೀ ಸಿ.ಎಂ. ಉದಾಸಿ : ಧಾರವಾಡ ಜಿಲ್ಲೆ, ಹಿರೇಕೆರೂರು ತಾಲ್ಲೂಕು ಹಳ್ಳೂರಿನಲ್ಲಿರುವ ಶ್ರೀ ರಂಗನಾಥ ಸ್ವಾಮಿ ಅನುದಾನಿತ ಪ್ರೌಢಶಾಲೆಗೆ ಅನುಮೋದನೆಯಾಗಿರುವ ಹೆಚ್ಚುವರಿ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಮಿತವ್ಯಯವನ್ನು ಸಡಿಲಿಸಿ ವೇತನ ಬಿಡುಗಡೆ ಮಾಡುವುದಕ್ಕೆ ಸಂಬಂಧಿಸಿದ ಅರ್ಜಿಯನ್ನು ಸದನಕ್ಕೆ ಒಪ್ಪಿಸಬಯಸುತ್ತೇನೆ.

ಅಧ್ಯಕ್ಷರು : ಅರ್ಜಿಯನ್ನು ಒಪ್ಪಿಸಲಾಯಿತು. ಗಮನ ಸೆಳೆಯುವ ಸೂಚನೆಗೆ ಹೋಗುವ ಮೊದಲು ಶಾಸಕರಾದ ಶ್ರೀ ಮಾರುತಿರಾವ್ ಪವಾರ್, ಶ್ರೀ ಶಂಕರಲಿಂಗೇಗೌಡ, ಶ್ರೀ ರಾಮದಾಸ್, ಶ್ರೀ ವಿಜಯಶಂಕರ್ ಅವರು ರೂಲ್191ರ ಕೆಳಗೆ ಒಂದು ಸೂಚನೆಯನ್ನು ಕಳುಹಿಸಿ ಅದರಲ್ಲಿ ತಮ್ಮ ಹಕ್ಕಿಗೆ ಚ್ಯುತಿ ಬಂದಿದೆ ಎಂದು ಹೇಳಿದ್ದಾರೆ. ಅದರ ಬಗ್ಗೆ ಸ್ವಲ್ಪ ಸೂಕ್ಷ್ಮವಾಗಿ ಪ್ರಸ್ತಾಪ ಮಾಡಿದರೆ ನಾನು ಆಮೇಲೆ ತೀರ್ಮಾನ ತೆಗೆದುಕೊಳ್ಳುತ್ತೇನೆ. ಮೊದಲಿಗೆ ಶ್ರೀ ಮಾರುತಿರಾವ್ ಪವಾರ್ ಅವರು,

ಹಕ್ಕುಚ್ಯುತಿ ನಿರ್ಣಯದ ಬಗ್ಗೆ ಪ್ರಸ್ತಾವನೆ

ಶಾಸಕರಿಗೆ ವಸತಿ ಮತ್ತು ನಗರಾಭಿವೃದ್ಧಿ ಇಲಾಖೆಯ ಅಧೀನ ಕಾರ್ಯದರ್ಶಿಗಳಿಂದ ಹಕ್ಕುಚ್ಯುತಿಯಾಗರುವ ಬಗ್ಗೆ

ಶ್ರೀ ಮಾರುತಿರಾವ್ ಪವಾರ್ (ನರಸಿಂಹರಾಜ) : ಸನ್ಮಾನ್ಯ ಅಧ್ಯಕ್ಷರೆ, ನಮ್ಮ ಶಾಸಕರಿಗೆ ಹಕ್ಕುಚ್ಯುತಿ ಆಗಿದೆ ಎನ್ನತಕ್ಕ ಹಿನ್ನಲೆಯಲ್ಲಿ ನಿಯಮ 191ರ ಪ್ರಕಾರ ನಮಗೆ ಆಗಿರತಕ್ಕ ಹಕ್ಕುಚ್ಯುತಿಯನ್ನು ಮಂಡನೆ ಮಾಡಲಿಕ್ಕೆ ತಮ್ಮ ಅನುಮತಿ ಕೇಳುತ್ತಿದ್ದೇನೆ. ಕರ್ನಾಟಕ ಗೃಹ ಮಂಡಲಿಯಲ್ಲಿ 1967ರಲ್ಲಿ ಕೆಲಸಕ್ಕೆ ಸೇರಿದ. ಶ್ರೀ ಕೆ. ಸಿದ್ದಪ್ಪ ಎಂಬುವವರು ಅಲ್ಲಿ ಕೆಲಸ ಮಾಡುತ್ತಿದ್ದರು. 17-8-1984ರಂದು ಕೆಲಸ ನಿರ್ವಹಿಸುವ ಸಂದರ್ಭದಲ್ಲಿ ಮರಣ· ಹೊಂದಿದ್ದು ಆತನಿಗೆ ದೊರಕಬೇಕಾದ ಮರಣೋತ್ತರ ಸೇವಾ ಸೌಲಭ್ಯಗಳನ್ನು ಇಲ್ಲಿಯತನಕ ನೀಡದೆ ಇರುವ ಹಿನ್ನಲೆಯಲ್ಲಿ ಅವರ ಪತ್ನಿ ಶ್ರೀಮತಿ ಸುಬ್ಬಮ್ಮನವರು ಹತ್ತು ವರ್ಷಗಳ ಕಾಲ ತನ್ನ ಪತಿ ಶ್ರೀ ಕೆ. ಸಿದ್ದಪ್ಪನವರ ಮರಣೋತ್ತರ ಸೇವಾ ಸೌಲಭ್ಯಗಳನ್ನು ಪಡೆಯುವುದಕ್ಕೋಸ್ಕರ ತನ್ನ ಎಲ್ಲಾ ಪ್ರಯತ್ನ ಮಾಡಿ ಸಾಕಾಗಿ ಕೊನೆಗೆ ನಾನು ಶಾಸತನಾದ ನಂತರ ಎಲ್ಲಾ ದಾಖಲೆಗಳನ್ನು ನನ್ನ ಕೈಗೆ ಕೊಟ್ಟರು. ಈ ದಾಖಲೆಗಳನ್ನು ತೆಗೆದುಕೊಂಡು ಹೋಗಿ ನಾನು ಕರ್ನಾಟಕ ಗೃಹ ಮಂಡಲಿಗೆ ಕಾವೇರಿ ಭವನದಲ್ಲಿರತಕ್ಕ ಕಛೇರಿಗೆ ಹೋಗಿ ಅಧಿಕಾರಿಣಿ ಒಬ್ಬರನ್ನು ಭೇಟಿ ಮಾಡಿ ಈ ಕಡತದ ಬಗ್ಗೆ ಏನಾಗಿದೆ ಎಂದು